Akashvani: Bangalore

Regional Bulletin In Kannada

22.08.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು:**

1. ಸಮೂಹಸನ್ನಿಯಿಂದ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಂಡಾಗಣದ ಬಳಿ ಕಾಲ್ತುಳಿತ: ವಿಧಾನಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ಸಾರ್ವಜನಿಕರಿಗೆ ಮರಳು ನಿಗದಿತ ದರದಲ್ಲಿ ಸಿಗುವಂತೆ ಸರ್ಕಾರಕ್ಕೆ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಶಿಫಾರಸು
3. ಅಕ್ರಮ ಗಣಿಗಾರಿಕೆಯಿಂದ ಗಳಿಸಿದ ಆಸ್ತಿ ಜಪ್ತಿಗೆ ಸಂಬಂಧಿಸಿದ ವಿಧೇಯಕ ಮೇಲ್ಮನೆಯಲ್ಲಿ ಅನುಮೋದನೆ
4. ಬೆಂಗಳೂರು-ಚಿತ್ರದುರ್ಗದಲ್ಲಿ ಜಾರಿ ನಿರ್ದೇಶನಾಲದ ಅಧಿಕಾರಿಗಳಿಂದ ದಾಳಿ ; ಚಿತ್ರದುರ್ಗ ಶಾಸಕರ ನಿವಾಸದಲ್ಲಿ ಶೋಧ
5. ಗಣೇಶ, ಈದ್ ಮಿಲಾದ್ ಹಬ್ಬದ ಹಿನ್ನೆಲೆ; ರಾಜ್ಯದ ವಿವಿಧೆಡೆ ಮುನ್ನೆಚ್ಚರಿಕಾ ಕ್ರಮ

*******

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಆರ್.ಸಿ.ಬಿ ತಂಡದ ವಿಜಯೋತ್ಸವದ ಕಾರ್ಯಕ್ರಮದಲ್ಲಿ ಸಂಭವಿಸಿದ ಕಾಲ್ತುಳಿತ ಹಾಗೂ ಹನ್ನೊಂದು ಮಂದಿ ಸಾವನಪ್ಪಿದ ದುರ್ಘಟನೆ ಸಮೂಹ ಸನ್ನಿಧಿಯಿಂದ ಸಂಭವಿಸಿದ ಘಟನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ನಡೆದ ಚರ್ಚೆಯ ಮೇಲೆ ಉತ್ತರ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಲ್ತುಳಿತ ಘಟನೆಯಲ್ಲಿ ಮೃತ ಪಟ್ಟವರೆಲ್ಲಾ ಚಿಕ್ಕ ವಯಸ್ಸಿನವರು. ಇದು ತುಂಬಾ ದುಖಕರ ಎಂದು ಹೇಳಿದ್ದಾರೆ. ತಮ್ಮ ನಲ್ವತ್ತು ವರ್ಷದ ರಾಜಕೀಯ ಜೀವನದಲ್ಲಿ ಇಂತಹ ಘಟನೆ ನಡೆದಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಬಿಜೆಪಿ ಶಾಸಕ ಸುರೇಶ್ ಕುಮಾರ್ ಅವರು ಈ ಪ್ರಕರಣಕ್ಕೆ ಸರ್ಕಾರವೇ ಕುಮ್ಮಕ್ಕು ನೀಡಿದೆ ಎಂದಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಕಾಲ್ತುಳಿತ ಘಟನೆಗೆ ಹೊಣೆಗಾರಿಕೆ ಮಾಡಿ ನಗರ ಪೊಲೀಸ್ ಆಯುಕ್ತರ ಸಹಿತ ಐದು ಮಂದಿ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ ಎಂದು ಮುಖ್ಯಮಂತ್ರಿ ತಮ್ಮ ಕ್ರಮ ಸಮರ್ಥಿಸಿಕೊಂಡರು.

*******

ರಾಜ್ಯದಲ್ಲಿ ಮನೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಎಂ ಸ್ಯಾಂಡ್ ಬದಲಾಗಿ, ಮರಳನ್ನು ಮಾತ್ರ ಉಪಯೋಗಿಸಲು ಸೂಚಿಸುವ ಜೊತೆಗೆ ಒಂದು ನಿಗದಿತ ದರ ಇಡಬೇಕೆಂದು ರಾಜ್ಯ ಸರ್ಕಾರಕ್ಕೆ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ

ಶಿಫಾರಸು ಮಾಡಿದೆ. ವಿಧಾನಪರಿಷತ್ತಿನಲ್ಲಿಂದು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಸದಸ್ಯ ಕೆ. ಅಬ್ದುಲ್ ಜಬ್ಬರ್ ಸಮಿತಿಯ ೨ನೇ ವರದಿ ಮಂಡಿಸಿದರು. ರಾಜ್ಯದಲ್ಲಿ ಹೊಸದಾಗಿ ಮನೆ ಕಟ್ಟುತ್ತಿರುವವರು ಹಾಗೂ ಮನೆ ದುರಸ್ತಿ ಮಾಡಿಕೊಳ್ಳುತ್ತಿರುವವರಿಗೆ ಮರಳು ಅತ್ಯವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಎಂ ಸ್ಯಾಂಡ್ ಬದಲಾಗಿ ಮರಳನ್ನು ಸುಲಭವಾಗಿ ಒಂದು ನಿಗದಿತ ದರದಲ್ಲಿ ಒದಗಿಸುವಂತೆ ಸಮಿತಿ ಶಿಫಾರಸ್ಸು ಮಾಡಿದೆ. ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಡಿ ನಿರ್ಮಿಸಲಾಗುತ್ತಿರುವ ವಸತಿ ಕಾಮಗಾರಿಯನ್ನು ಆದ್ಯತೆಯ ಮೇರೆಗೆ ೨೦೦೨೯ನೇ ಸಾಲಿನ ಅಂತ್ಯದೊಳಗೆ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಕಡ್ಡಾಯವಾಗಿ ಹಂಚಿಕೆ ಮಾಡಲು ಶಿಫಾರಸ್ಸು ಮಾಡಿದೆ.

*******

ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶಪಡಿಸಿಕೊಳ್ಳುವುದು ಮತ್ತು ಜಪ್ತಿಗಾಗಿ ವಸೂಲಿ ಆಯುಕ್ತರನ್ನು ನೇಮಿಸಲು ಸಂಬಂಧಿಸಿದ ವಿಧೇಯಕ ಮೇಲ್ಮನೆಯಲ್ಲೂ ಅನುಮೋದನೆಗೊಂಡಿತು. ವಿಧಾನಪರಿಷತ್ತಿನ ಶಾಸನ ರಚನೆ ಕಲಾಪದಲ್ಲಿಂದು ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ವಿಧೇಯಕವನ್ನು ಮಂಡಿಸಿದರು. ಬಳಿಕ ವಿವರಣೆ ನೀಡಿದ ಸಚಿವರು, ಕಾನೂನುಬಾಹಿರ ಸಂಪಾದಿಸಿದ ಆಸ್ತಿಯನ್ನು ಜಪ್ತಿ ಮಾಡುವ ನಿಟ್ಟಿನಲ್ಲಿ ಈ ವಿಧೇಯಕ ತರಲಾಗಿದೆ. ಆಸ್ತಿಗಳನ್ನು ವಶಪಡಿಸಿಕೊಳ್ಳಲು ಆಯುಕ್ತರ ನೇಮಕ ಮಾಡಬೇಕಾಗಿದೆ ಎಂದು ಹೇಳಿದರು.

*******

ವಿಧಾನಪರಿಷತ್ತಿನಲ್ಲಿ ಇಂದು ಹಲವು ವರದಿಗಳನ್ನು ಮಂಡನೆ ಮಾಡಲಾಯಿತು. ಗಂಗಾ ಕಲ್ಯಾಣ ಯೋಜನಾ ವಿಶೇಷ ಸದನ ಸಮಿತಿ ಅಧ್ಯಕ್ಷ ನಿರಾಣಿ ಹಣಮಂತ್ ರುದ್ರಪ್ಪ ಅವರು ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವಿವಿಧ ನಿಗಮಗಳಲ್ಲಿ ನಡೆದಿರುವ ಅವ್ಯವಹಾರಗಳ ಕುರಿತು ಪರಿಶೀಲಿಸಲು ರಚಿಸಲಾದ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿ ಅಂತಿಮ ವರದಿ ಮಂಡಿಸಿದರು. ಬಳಿಕ, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಸದಸ್ಯ ಕೆ. ಅಬ್ದುಲ್ ಜಬ್ಬರ್ ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ೨ನೇ ವರದಿ ಮಂಡಿಸಿದರು. ಈ ನಡುವೆ ರಾಯಲ್ ರೀಜನಲ್ ಟೂರಿಸಂ ಪ್ರಾಧಿಕಾರ ರಚನೆಗೆ ಸಂಬಂಧಿಸಿದಂತೆ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ. ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ ತಿದ್ದುಪಡಿ ವಿಧೇಯಕ ಅಂಗೀಕಾರ ಚರ್ಚೆ ವೇಳೆ ಪ್ರಾಧಿಕಾರ ರಚನೆಗೆ ಸಂಬಂಧಿಸಿದಂತೆ ಸದಸ್ಯ ಎಚ್. ವಿಶ್ವನಾಥ್ ಅವರ ಸಲಹೆ ಪರಿಗಣಿಸಿದ ಅವರು ಪ್ರಾಧಿಕಾರ ರಚನೆ ಆಶಯ

ವ್ಯಕ್ತಪಡಿಸಿದರು. ಶಕ್ತಿ ಯೋಜನೆ ಕಾರಣದಿಂದಾಗಿ ಸ್ಥಳೀಯ ಪ್ರವಾಸೋದ್ಯಮ, ಹಾಗೂ ದೇವಾಲಯ ಪ್ರವಾಸೋದ್ಯಮ ಬೆಳವಣಿಗೆ ಕಂಡಿದೆ ಎಂದು ತಿಳಿಸಿದ್ದಾರೆ.

*******

ಬೆಂಗಳೂರು ಹಾಗೂ ಚಿತ್ರದುರ್ಗದಲ್ಲಿ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಚಿತ್ರದುರ್ಗದ ಶಾಸಕ ಕೆ.ಸಿ. ವೀರೇಂದ್ರ ಹಾಗೂ ಅವರ ಸಹೋದರರಾದ ಕೆ.ಸಿ. ನಾಗರಾಜ, ಕೆ.ಸಿ. ತಿಪ್ಪೇಸ್ವಾಮಿ ಅವರಿಗೆ ಸೇರಿದ ನಿವಾಸಗಳು ಸೇರಿದಂತೆ ಹಲವೆಡೆ ಶೋಧ ನಡೆಸಲಾಗಿದೆ. ಅವರ ಸಂಬಂಧಿ ಹೊಸಮನೆ ಸ್ವಾಮಿ ಅವರ ನಿವಾಸದ ಮೇಲೂ ದಾಳಿ ನಡೆಸಲಾಗಿದೆ. ಬೆಂಗಳೂರಿನ ಸಹಕಾರ ನಗರದಲ್ಲಿರುವ ವೀರೇಂದ್ರ ಅವರ ನಿವಾಸದಲ್ಲೂ ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ. ಬೆಂಗಳೂರಿನಲ್ಲಿ ಕಾಂಗ್ರೆಸ್ ನಾಯಕಿ ಕುಸುಮಾ ನಿವಾಸದಲ್ಲೂ ಪರಿಶೀಲನೆ ನಡೆಸುತ್ತಿದ್ದಾರೆ.

*******

ಆನ್‌ಲೈನ್ ಬೆಟ್ಟಿಂಗ್ ಆಪ್‌ಗಳು ಮತ್ತು ಕ್ರಿಕೆಟ್ ಬೆಟ್ಟಿಂಗ್ ಆಪ್‌ಗಳನ್ನು ನಿಷೇಧ ಮಾಡಿದ ಕೇಂದ್ರ ಸರ್ಕಾರದ ನಿರ್ಧಾರ ಸ್ವಾಗತಾರ್ಹ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ ಹೇಳಿದ್ದಾರೆ.

ಲಕ್ಷಾಂತರ ಮಹಿಳೆಯರು, ಕುಟುಂಬ ವರ್ಗ ಲಕ್ಷಾಂತರ ರೈತರ ಮಕ್ಕಳು ಈ ಆನ್‌ಲೈನ್ ಬೆಟ್ಟಿಂಗ್ ಮತ್ತು ಕ್ರಿಕೆಟ್ ಬೆಟ್ಟಿಂಗ್ ಆಪ್‌ಗಳ ಚಟಕ್ಕೆ ತುತ್ತಾಗಿ ದೇಶದಾದ್ಯಂತ ಸಾವಿರಾರು ಜನ ಆತ್ಮಹತ್ಯೆ ಮಾಡಿಕೊಂಡಿದ್ದರು ಇದನ್ನು ಮನಗಂಡು ಕುರುಬರ ಶಾಂತಕುಮಾರ್ ನೇತೃತ್ವದ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಜಿ ನಾರಾಯಣ ಕುಮಾರ್ ಕನ್ನಡ ಚಳುವಳಿ ಕೇಂದ್ರ ಸಮಿತಿ ಪತ್ರ ಬರೆದು, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಗಮನ ಸೆಳೆದಿದ್ದವು.

*******

ಡಿಜೆ ಧ್ವನಿವರ್ಧಕ ಬಳಕೆ ವಿಷಯವಾಗಿ ಸುಪ್ರೀಂಕೋರ್ಟ್ ನೀಡಿದ ಆದೇಶದಂತೆಯೇ ನಡೆದುಕೊಳ್ಳಬೇಕು. ಆದೇಶ ಮೀರಿ ನಿರ್ಧಾರ ತೆಗೆದುಕೊಳ್ಳಲು ಆಗುವುದಿಲ್ಲ ಎಂದು ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ ತಿಳಿಸಿದ್ದಾರೆ. ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ನಿಮಿತ್ತ ಇಲ್ಲಿಯ ದೇಶಪಾಂಡೆ ನಗರದ ಸವಾಯಿ ಗಂಧರ್ವ ಸಭಾಂಗಣದಲ್ಲಿ ಏರ್ಪಡಿಸಿದ್ದ ಸೌಹಾರ್ದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆಲವು ಕಿಡಿಗೇಡಿಗಳಿಂದ ಹಬ್ಬದ ಆಚರಣೆಗೆ ಭಂಗವಾಗಬಹುದು. ಅಂಥವರನ್ನು ಈಗಾಗಲೇ ಗಡಿಪಾರು ಮಾಡಲಾಗಿದೆ. ಇನ್ನಷ್ಟು ರೌಡಿಶೀಟರ್‌ಗಳನ್ನು ೩-೪ ದಿನಗಳಲ್ಲಿ ಗಡಿಪಾರು ಮಾಡಲಾಗುವುದು ಎಂದರು.

ಗಣಪತಿ ಹಬ್ಬದ ಹಿನ್ನೆಲೆಯಲ್ಲಿ ಪೆಂಡಾಲ್ ಚಪ್ಪರವನ್ನು ನಿರ್ಮಿಸುವಾಗ ಅಗ್ನಿ ನಿರೋಧಕ ವಸ್ತುಗಳಾದ ಜಿಂಕ್‌ಶೀಟ್ ಇತ್ಯಾದಿಗಳನ್ನು ಬಳಸಬೇಕು. ಹಾಗೆಯೇ ಅಗ್ನಿ ನಿರೋಧಕ ವಸ್ತುಗಳನ್ನು ಉಪಯೋಗಿಸಿ

ಪೆಂಡಾಲ್‌ನ ಒಳ ಅಲಂಕಾರ ಮಾಡಬೇಕು ಎಂದು ಚಿಕ್ಕಮಗಳೂರಿನ ಅಗ್ನಿಶಾಮಕ ಇಲಾಖೆ ಸೂಚಿಸಿದೆ.

*******

ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ ರಾಜ್ಯದ ಹಲವೆಡೆ ಇಂದು ಹಿಂದೂಪರ ಸಂಘಟನೆಗಳು ಪ್ರತಿಭಟನೆ ಹಮ್ಮಿಕೊಂಡಿವೆ. ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ನಡೆದ ಬಂದ್ ಯಶಸ್ವಿಯಾಗಿದೆ. ಬೆಳಗ್ಗಿನಿಂದಲೇ ಅಂಗಡಿ- ಮುಗ್ಗಟ್ಟು ಮುಚ್ಚಿದ್ದು, ಜನ ಸಂಚಾರ ವಿರಳವಾಗಿತ್ತು. ಬಸ್ ಸಂಚಾರ, ಶಾಲಾ- ಕಾಲೇಜು, ತುರ್ತು ಸೌಲಭ್ಯ ಯಥಾಸ್ಥಿತಿಯಲ್ಲಿತ್ತು. ಧರ್ಮಸ್ಥಳದ ಕುರಿತು ಅಪಪ್ರಚಾರ ಮಾಡುತ್ತಿರುವವರು ವಿರುದ್ಧ ಬಳ್ಳಾರಿಯಲ್ಲಿ ಇಂದು ಬಿಜೆಪಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು. ನಗರದ ಗಡಗಿ ಚೆನ್ನಪ್ಪ ಸರ್ಕಲ್ ಬಳಿ ಸೇರಿದ ಪಕ್ಷದ ಕಾರ್ಯಕರ್ತರು, ಮುಖಂಡರು ನಗರದ ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ ನೇತೃತ್ವದಲ್ಲಿ ಗಡಗಿ ಚೆನ್ನಪ್ಪ ವೃತ್ತದಿಂದ ಡಿಸಿ ಕಚೇರಿ ವರೆಗೆ ಪ್ರತಿಭಟನಾ ಮೆರವಣಿಗೆ ಮೂಲಕ ತೆರಳಿ ಈ ಕೃತ್ಯದಲ್ಲಿ ತೊಡಗಿರುವವರ ವಿರುದ್ಧ ಕ್ರಮಕ್ಕೆ ಮನವಿ ಸಲ್ಲಿಸಲಾಯಿತು.

*******

ಯಾದಗಿರಿ ಜಿಲ್ಲೆಯಾದ್ಯಂತ ಆರೇಳು ದಿನಗಳವರೆಗೆ ನಿರಂತರವಾಗಿ ಮಳೆ ಸುರಿದ ಪರಿಣಾಮ ರೈತರ ಜಮೀನಿನಲ್ಲಿ ಬೆಳೆದ ಬೆಳೆ ಹಾನಿಯ ಕುರಿತು ಕೃಷಿ, ತೋಟಗಾರಿಕೆ ಹಾಗೂ ಕಂದಾಯ ಇಲಾಖೆಗಳಿಂದ ಜಂಟಿ ಸಮೀಕ್ಷೆ ನಡೆಸಲಾಗುತ್ತಿದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ೩.೯೦ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಈಚೆಗೆ ಬಿದ್ದ ಮಳೆಯಿಂದಾಗಿ ಪ್ರಾಥಮಿಕ ಮಾಹಿತಿ ಪ್ರಕಾರ ೨೮ ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಬೆಳೆಗಳಿಗೆ ಹಾನಿಯಾಗಿರುವ ಸಾಧ್ಯತೆ ಇದೆ ಎಂದು ಕೃಷಿ ಅಧಿಕಾರಿಗಳು ತಿಳಿಸಿದ್ದಾರೆ. ಹಳ್ಳಗಳು, ಕೋಡಿ ಬಿದ್ದ ಕೆರೆಗಳ ನೀರು ಸೇರಿದಂತೆ ಅತಿವೃಷ್ಟಿಯಿಂದ ಹೊಲಗಳಲ್ಲಿನ ಬೆಳೆಗಳು ಕೊಚ್ಚಿ ಹೋಗಿದ್ದನ್ನು ೩ ಇಲಾಖೆಗಳ ಅಧಿಕಾರಿಗಳು ಸಮೀಕ್ಷೆ ಮಾಡುತ್ತಿದ್ದಾರೆ. ತೋಟಗಾರಿಕೆ, ಕಂದಾಯ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳು ಜಂಟಿ ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಕಂದಾಯ ಅಧಿಕಾರಿ, ಗ್ರಾಮ ಆಡಳಿತ ಅಧಿಕಾರಿಯೊಂದಿಗೆ ತೋಟಗಾರಿಕೆ, ಕೃಷಿ ಸಿಬ್ಬಂದಿ ಹಾನಿಯಾದ ಜಮೀನುಗಳಿಗೆ ಭೇಟಿ ಕೊಡುತ್ತಿದ್ದಾರೆ. ಹಾನಿಯಾದ ಬೆಳೆಯ ಜಿಪಿಎಸ್ ಸಹಿತ ಫೋಟೊಗಳನ್ನು ತೆಗೆದು ಅಪ್ ಲೋಡ್ ಮಾಡುವಂತೆ ಸೂಚಿಸಲಾಗಿದೆ. ಜಮೀನಿನ ಜಿಪಿಎಸ್ ಫೋಟೊ ಕಡ್ಡಾಯ ಮಾಡಲಾಗಿದೆ ಎಂದು ಯಾದಗಿರಿ ಜಂಟಿ ಕೃಷಿ ನಿರ್ದೇಶಕ ರತೇಂದ್ರನಾಥ ಸೂಗುರ ತಿಳಿಸಿದ್ದಾರೆ.

***END***